# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಚೌಡೇಶ್ವರಿ ವಾರ್ಡ್ ನಂ-02ರಲ್ಲಿ

## ದಿನಾಂಕ: 07-01-2023 ರಂದು ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

ದಿನಾಂಕ: 07-01-2023 ರಂದು ಬೆಳಗ್ಗೆ 11.00 ಗಂಟೆಗೆ ಬಿ.ಬಿ.ಎಂ.ಪಿ ಯಲಹಂಕ ವಿಭಾಗದ ಕಛೇರಿಯಲ್ಲಿ ವಾರ್ಡ್ ನಂ-02ರ ವಾರ್ಡ್ ಸಮಿತಿಯ ಮಾನ್ಯ ನೋಡೆಲ್ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಜೊತೆ ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು.

| ಕ್ರ.ಸಂ | ಸಭೆಯಲ್ಲಿ ಭಾಗವಹಿಸಿದ ಅಧಿಕಾರಿ ಹೆಸರು | ಪದನಾಮ |
|---|---|---|
| 01 | ಶ್ರೀ.ಕೆ.ಜಿ.ಸುಂದರೇಶ್ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ) |
| 02 | ಶ್ರೀ.ನರಸಿಂಹಯ್ಯ | ಕಾರ್ಯದರ್ಶಿಗಳು ಮತ್ತು ಸಹಾಯಕ ಅಭಿಯಂತರರು (ವಾರ್ಡ್ ನಂ-02) |
| 03 | ಡಾ11 ಮಂಜುಳ ಎಸ್ | ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯ (ಗೈರು ಹಾಜರಿ) |
| 04 | ಶ್ರೀ.ಕೆ.ಎನ್. ಬಾಬುರೆಡ್ಡಿ | ಸಹಾಯಕ ಅಭಿಯಂತರರು (ವಿದ್ಯುತ್) (ಗೈರು ಹಾಜರಿ) |
| 05 | ಶ್ರೀ.ಅಶೋಕ್ .ಎಂ.ಆರ್ | ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ(ಗೈರು ಹಾಜರಿ) |
| 06 | ಶ್ರೀ. ಎನ್. ಶ್ರೀರಾಮು ರೆಡ್ಡಿ | ರೆವಿನ್ಯೂ ಇನ್ಸ್‌ಪೇಕ್ಟರ್ |
| 07 | ಶ್ರೀ. ವಿನಯ ಕುಮಾರ್ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 08 | ಶ್ರೀಮತಿ. ಸುನಂದಮ್ಮ | ಹಿರಿಯ ಆರೋಗ್ಯ ಪರಿವೀಕ್ಷಕರು |
| 09 | ಶ್ರೀ.ಕುಮಾರ್ ಸ್ವಾಮಿ | ಜಾನುವಾರ ಅಧಿಕಾರಿಗಳು |
| 10 | ಶ್ರೀಮತಿ. ನಂದಶ್ರೀ. | ಕಿರಿಯ ಆರೋಗ್ಯ ಪರಿವೀಕ್ಷಕರು |
| 11 | ಶ್ರೀ.ರಾಮಲಿಂಗ | ಜಲ ಪರೀವಿಕ್ಷಕರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 12 | ಶ್ರೀ.ವಿನಯಕುಮಾರ್ | (ಸ.ಅ) ವಿದ್ಯುತ್ |
| | ಬಡಾವಣೆ ಕ್ಷೇಮಾಭಿವೃದಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು/ಸಾರ್ವಜನಿಕರು | |
| 01 | ಶ್ರೀ.ಹೇಮರಾಜ್ | ಸ್ಥಳೀಯ ಮುಖಂಡರು |
| 02 | ಶ್ರೀ. ಅ.ಬ ಶಿವಕುಮಾರ್ | ಸ್ಥಳೀಯ ಮುಖಂಡರು |
| 03 | ಶ್ರೀ.ರಾಮರೆಡ್ಡಿ | ಸ್ಥಳೀಯ ನಿವಾಸಿಗಳು |

| | | |
|---|---|---|
| 04 | ಶ್ರೀ.ಎ.ಎಸ್.ರಾಜು | ಸ್ಥಳೀಯ ನಿವಾಸಿಗಳು |
| 05 | ಶ್ರೀ.ಶ್ರೀನಿವಾಸಲು | ಸ್ಥಳೀಯ ನಿವಾಸಿಗಳು |
| 06 | ಶ್ರೀ.ವೆಂಕಟೇಶ್ | ಮಾರುತಿನಗರ |
| 07 | ಹರಿನಾಥ | ಸಾರ್ವಜನಿಕರು |
| 08 | ಶಂಕರ್ ನಾಯಕ್ | ನಾಗರ್ಜುನ ಅಪಾರ್ಟ್‌ಮೆಂಟ್ (ಅಧ್ಯಕ್ಷರು) |
| 09 | ವೇಣುಗೋಪಾಲ | ಕೊಂಡಪ್ಪ ಬಡಾವಣೆ |

ಶ್ರೀ.ನರಸಿಂಹಯ್ಯ ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು ವಾರ್ಡ್ ನಂ-02 ರವರು ಸಭೆಗೆ ಹಾಜರಿದ್ದ ನೋಡೆಲ್ ಅಧಿಕಾರಿಗಳು ಹಾಗೂ ಬಾಗವಹಿಸಿದ್ದ ಎಲ್ಲಾ ಅಧಿಕಾರಿಗಳನ್ನು ಮತ್ತು ಸಾರ್ವಜನಿಕರ ಸಭೆಗೆ ಸ್ವಾಗತಿಸುತ್ತಾ ಸಭೆ ಪ್ರಾರಂಭಿಸಲು ನೋಡೆಲ್ ಅಧಿಕಾರಿರವರನ್ನು ಕೋರಲಾಯಿತು.

ಅದರಂತೆ ಈ ಹಿಂದಿನ ಸಭೆಯಲ್ಲಿ ಅಂದರೆ ದಿನಾಂಕ: 17-12-2023 ರಂದು ನಡೆದ ಸಭೆಯಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ವಿವರಣೆ ಕೇಳಿದರು. ಹಾಗೂ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಧಿಕಾರಿಗಳಿಗೆ ಕೈಗೊಂಡ ಕ್ರಮದ ಬಗ್ಗೆ ವರದಿ ನೀಡುವಂತೆ ಸಭೆಯಲ್ಲಿ ಸೂಚಿಸಿದರು. ಹಾಗೂ ಈ ಹಿಂದೆ ಕೈಗೊಂಡಿರುವ ಸಭೆಯ ನಡವಳಿಗಳನ್ನು ಸಭೆಯಲ್ಲಿ ವರದಿಯನ್ನು ಒದಲಾಯಿತು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ಚೌಡೇಶ್ವರಿ ವಾರ್ಡ್ ನಂ -02ರ ವ್ಯಾಪ್ತಿಯಲ್ಲಿರುವ ಯಲಹಂಕ ಒಲ್ಡ್ ಟೌನ್‌ನಲ್ಲಿರುವ ಯಲಹಂಕ ಕೆರೆಯ ಪಕ್ಕದಲ್ಲಿರುವ ರಾಜಕಾಲುವೆಯಲ್ಲಿ ತುಂಬಿರುವ ಹೂಳನ್ನು ತೆಗೆಯುವಂತೆ ಮತ್ತು ಕೆರೆ ಕೋಡಿ ಹತ್ತಿರ ಕಸವನ್ನು ರಸ್ತೆಯ ಮೇಲೆ ಸುರಿಯುತ್ತಿರುವುದನ್ನು ತಪ್ಪಿಸಬೇಕೆಂದು ಸ್ಥಳೀಯ ನಿವಾಸಿಗಳಾದ ಹರಿನಾಥ್ ರವರು ಸಭೆಯಲ್ಲಿ ಅಕ್ಷೇಪಣೆ ವ್ಯಕ್ತಪಡಿಸಿದರು. | ಇದಕ್ಕೆ ಸಂಬಂದಿಸಿದಂತೆ ನೋಡೆಲ್ ಅಧಿಕಾರಿಗಳು ಮಾತನಾಡಿ ಕೆರೆಯ ಪಕ್ಕದಲ್ಲಿ ಕಸ ಹಾಕದಂತೆ ತಡೆಯಲು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಮತ್ತು ಸ್ಥಳ ಪರಿಶೀಲನೆ ಮಾಡಿ ಹಾಲಿ ಇರುವ ಕಸವನ್ನು ತೆರವುಗೊಳಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು. | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-02. |
| 02 | ಚೌಡೇಶ್ವರಿ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿರುವ ಕೊಂಡಪ್ಪ ಬಡಾವಣೆ ಮತ್ತು ಕಾಮಾಕ್ಷಮ್ಮ ಬಡಾವಣೆ ಮತ್ತು ಚೌಡೇಶ್ವರಿ ಬಡಾವಣೆಯಲ್ಲಿ ಬೇಸ್ಕಾಂ ವತಿಯಿಂದ ಟ್ರಾನ್ಸ್‌ಪಾರಂಗಳು ಕೆಳಗೆ ಇರುವುದನ್ನು ತಪ್ಪಿಸುವಂತೆ ಹಾಗೂ ಈಗಾಗಲೇ ಹಸುಗಳ ಸತ್ತುಹೊಗಿದ್ದು, ಇದರ ಬಗ್ಗೆ ಹಲವಾರು ಭಾರಿ ದೂರುಗಳನ್ನು ಸಲ್ಲಿಸಿದರೂ ಸಹ ಬೇಸ್ಕಾಂ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಎಂದು ಮತ್ತು | ಇದಕ್ಕೆ ಸಂಬಂಧಿಸಿದಂತೆ ನೋಡೆಲ್ ಅಧಿಕಾರಿಗಳು ಮಾತನಾಡಿ ಬೇಸ್ಕಾಂ ಮತ್ತು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸ್ಥಳ ಪರಿಶೀಲನೆ ಮಾಡಿ ವಿದ್ಯುತ್ ಲಿಕೇಜ್ ಉಂಟಾಗದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಿದರು. | ಬೇಸ್ಕಾಂ ಮತ್ತು ಬಿ.ಡಬ್ಲ್ಯೂಎಸ್.ಎಸ್.ಬಿ ಇಲಾಖೆ ಸಹಾಯಕ ಅಭಿಯಂತರರು ವಾರ್ಡ್ ನಂ-02 |

| | | | |
|---|---|---|---|
| | ಬೊರ್‌ವೆಲ್ ಸ್ಟಾರ್ಟರ್ ಬಾಕ್ಸ್‌ಗಳಲ್ಲಿ ವಿದ್ಯುತ್ ಲಿಕೇಜ್ ಆಗುತ್ತಿದ್ದು, ಇದನ್ನು ಸರಿಪಡಿಸಿರುವುದಿಲ್ಲ ಎಂದು ಸಭೆಯಲ್ಲಿ ಸ್ಥಳಿಯ ನಿವಾಸಿಗಳು ಅಕ್ಷೇಪಣೆ ವ್ಯಕ್ತಪಡಿಸಿದರು. | | |
| 03 | ಕಾಮಾಕ್ಷಮ್ಮ ಬಡಾವಣೆಯಲ್ಲಿ ಬ್ಲಾಕ್ ಸ್ಪಾರ್ಟ್ ಗಳಲ್ಲಿ ಕಸ ತೆಗೆಯುವಂತೆ ಸ್ಥಳೀಯರು ಸಭೆಯಲ್ಲಿ ಕೋರಿದರು | ನೊಡೆಲ್ ಅಧಿಕಾರಿಗಳು ಮಾತನಾಡಿ ಸ್ಥಳ ಪರಿಶೀಲನೆ ಮಾಡಿ ಬ್ಲಾಕ್ ಸ್ಪಾರ್ಟ್‌ಗಳಲ್ಲಿರುವ ಕಸ ತೆಗೆಯುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಯಿತು. | ಕಿರಿಯ ಆರೋಗ್ಯ ಪರಿವೀಕ್ಷಕರು |
| 04 | ವಾರ್ಡ್ ನಂ-02ರ ವ್ಯಾಪ್ತಿಯಲ್ಲಿರುವ ಪ್ರದೇಶಗಳಲ್ಲಿ ಸ್ಯಾನಿಟರಿ ಲೈನ್‌ಅನ್ನು ತೆರೆದ ಚರಂಡಿಗೆ ಬಿಡುತ್ತಿರುತ್ತಾರೆಂದು ಮತ್ತು ಕೊಂಡಪ್ಪ ಬಡಾವಣೆ 26ನೇ ಅಡ್ಡರಸ್ತೆಯಲ್ಲಿ ಮಸಿದಿ ಹತ್ತಿರ ಸ್ಯಾನಿಟರಿ ಕ್ಲಿನ್ ಮಾಡಿಲ್ಲವೆಂದು ಸ್ಥಳೀಯ ನಿವಾಸಿಗಳಾದ ದಾಮೋದರ್ ಸಭೆಯಲ್ಲಿ ಅಕ್ಷೇಪಣೆ ವ್ಯಕ್ತಪಡಿಸಿದರು. | ಇದಕ್ಕೆ ಸಂಬಂಧಿಸಿದಂತೆ ನೊಡೆಲ್ ಅಧಿಕಾರಿಗಳು ಮಾತನಾಡಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸ್ಥಳ ಪರಿಶೀಲನೆ ಮಾಡಿ ಸ್ಯಾನಿಟರಿ ಲೈನ್‌ಅನ್ನು ತೆರೆದ ಚರಂಡಿಗೆ ಬಿಟ್ಟಿರುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ತಿಳಿಸಿದರು. | ಬಿ.ಡಬ್ಲ್ಯೂಎಸ್.ಎಸ್.ಬಿ ಇಲಾಖೆ ಸಹಾಯಕ ಅಭಿಯಂತರರು |
| 05 | ಪುಟ್ಟೇನಹಳ್ಳಿ ಕಾಲೋನಿ ಡಿಪೋ ಮೇಲುಗಡೆ ಇರುವ ಸ್ಮಶಾನದ ತುಂಬಾ ಗಿಡಗಂಟೆಗಳು ಬೆಳೆದಿದ್ದು, ಇದರಿಂದ ಅಕ್ಕಪಕ್ಕದ ಮನೆಯುವರು ಭಯಬೀತರಾಗಿರುವುದರಿಂದ ಬಿ.ಬಿ.ಎಂ.ಪಿ ವತಿಯಿಂದ ಕ್ಲಿನಿಂಗ್ ಕೆಲಸ ಮಾಡಿಕೊಡಬೇಕೆಂದು ಸ್ಥಳಿಯ ಮುಖಂಡರುಗಳಾದ ಶ್ರೀ.ಶಿವಕುಮಾರ್ ನಾಗೇನಹಳ್ಳಿ ರವರು ಸಭೆಗೆ ಕೋರಿದರು. | ಇದಕ್ಕೆ ಸಂಬಂದಿಸಿದಂತೆ ನೊಡೆಲ್ ಅಧಿಕಾರಿಗಳು ಮಾತನಾಡಿ ಸ್ಮಶಾನ ಸ್ವಚ್ಚತೆ ಮಾಡಲು ಕ್ರೀಯಾ ಯೋಜನೆಯಲ್ಲಿ ರೂಪಿಸಿಕೊಳ್ಳುವಂತೆ ಸಂಬಂದಿಸಿದ ವಾರ್ಡ್ ಅಭಿಯಂತರರಿಗೆ ತಿಳಿಸಿದರು. | ಸಹಾಯಕ ಅಭಿಯಂತರರು ವಾರ್ಡ್ ನಂ-02 |
| 06 | ನಾಗೇನಹಳ್ಳಿ ಗ್ರಾಮದ ಹತ್ತಿರ ಇರುವ ಸರ್ಕಾರಿ ಶಾಲೆ ಹತ್ತಿರ ಹೈ ಮಾಸ್ಕ್ ಲೈಟ್ ಲೈನ್ ಕಟ್ಟಾಗಿರುವ ಬಗ್ಗೆ ಹಾಗೂ ಒಂದು ವೇಳೆ ಲೈನ್ ಕೆಳಗೆ ಬಿದ್ದರೆ ಶಾಲೆಯ ಮಕ್ಕಳಿಗೆ ತುಂಬಾ ತೊಂಧರೆ ಉಂಟಾಗುವುದಾಗಿ ತಿಳಿಸಿ ಕೂಡಲೇ ಸರಿಪಡಿಸಬೇಕೆಂದು ಶಿವಕುಮಾರ್ ನಾಗೇನಹಳ್ಳಿ ರವರು ಸಭೆಯಲ್ಲಿ ಕೋರಿದರು. | ಇದಕ್ಕೆ ಸಂಬಂದಿಸಿದಂತೆ ನೊಡೆಲ್ ಅಧಿಕಾರಿಗಳು ಮಾತನಾಡಿ ಬೇಸ್ಕಾಂ ಅಧಿಕಾರಿಗಳಿಗೆ ಕೂಡಲೇ ಸ್ಥಳ ಪರಿಶೀಲನೆ ಮಾಢಿ ಲೈನ್ ಸರಿಪಡಿಸುವಂತೆ ಸಭೆಯಲ್ಲಿ ತಿಳಿಸಿದರು. | ಸಹಾಯಕ ಅಭಿಯಂತರರು ಬೇಸ್ಕಾಂ ಇಲಾಖೆ |
| 07 | ನಾಗೇನಹಳ್ಳಿ ಶಾಲೆಯ ಹತ್ತಿರ ನೀರು ಲಿಕೇಜ್ ಆಗಿ ಕಾಬಲ್ ಸ್ಟೋನ್‌ಮೇಲೆ ಪಾಚಿ ಕಟ್ಟಿರುವುದರಿಂದ ಮಕ್ಕಳ ಜಾರಿ ಬೀಳುತ್ತಿರುವುದರಿಂದ ಕೂಡಲೇ ಬೊರ್‌ವೆಲ್ ಹತ್ತಿರ ಲಿಕೇಜ್ ಸರಿಪಡಿಸಿಕೊಡಬೇಕೆಂದು ಹಾಗೂ ಪಾಚಿ ಕ್ಲಿನಿಂಗ್ | ಬೊರ್‌ವೆಲ್ ರಿಪೇರಿ ಮತ್ತು ನಿರ್ವಹಣೆ ಮಾಡುವ ಗುತ್ತಿಗೆದಾರರಿಗೆ ಕೂಡಲೇ ಸ್ಥಳ ಪರಿಶೀಲನೆ ಮಾಡಿ ಲಿಕೇಜ್ ರಿಪೇರಿ ಮಾಢಿಕೊಡಬೇಕೆಂದು ಸಭೆಯಲ್ಲಿ ನೊಡೆಲ್ ಅಧಿಕಾರಿಗಳು ಬೊರ್‌ವೆಲ್ ನಿರ್ವಹಣೆ | ಸಹಾಯಕ ಅಭಿಯಂತರರು ವಾರ್ಡ್ ನಂ-02 |

| | | | |
|---|---|---|---|
| | ಮಾಡಿಕೊಡಬೇಕೆಂದು ಸಭೆಯಲ್ಲಿ ಶಿವಕುಮಾರ್ ರವರು ಕೋರಿದರು. | ಗುತ್ತಿಗೆದಾರರಿಗೆ ತಿಳಿಸಿದರು. | |
| 08 | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಸಮಾರು ಒಂದುವರೆ ವರ್ಷದಿಂದ ದೊಡ್ಡಗಾತ್ರದ ರಿಂಗ್‌ನ್ನು ನಾಗೇನಹಳ್ಳಿ ಮುಖ್ಯರಸ್ತೆಯಲ್ಲಿ ಬಿಟ್ಟಿರುವುದರಿಂದ ಸಾರ್ವಜನಿಕರ ಒಡಾಟಕ್ಕೆ ಮತ್ತು ವಾಹನ ಸಂಚಾರಕ್ಕೆ ತುಂಬಾ ತೊಂದರೆ ಉಂಟಾಗುತ್ತಿರುವುದಾಗಿ ಸಭೆಯಲ್ಲಿ ನಾಗೇನಹಳ್ಳಿ ಶಿವಕುಮಾರ್ ರವರು ಅಕ್ಷೇಪಣೆ ವ್ಯಕ್ತಪಡಿಸಿದರು. | ಇದಕ್ಕೆ ಸಂಬಂಧಿಸಿದಂತೆ ನೊಡೆಲ್ ಅಧಿಕಾರಿಗಳು ಮಾತನಾಡಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸ್ಥಳ ಪರಿಶೀಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ತಿಳಿಸಿದರು. | ಬಿ.ಡಬ್ಲ್ಯೂಎಸ್.ಎಸ್.ಬಿ ಇಲಾಖೆ ಸಹಾಯಕ ಅಭಿಯಂತರರು |
| 09 | ವಾರ್ಡ್ ನಂ–02ರ ಅನಂತಪುರ ಗ್ರಾಮದ 11ನೇ ಮುಖ್ಯರಸ್ತೆಯ ಎಡ ಬಾಗದ ಅಡ್ಡರಸ್ತೆಗಳಿಗೆ "ಶ್ರೀಗಂಧ ಬಡಾವಣೆ ಎಂದು ನಾಮಫಲಕ ಆಳವಡಿಸಲು ಅನುಮತಿ ನೀಡುವ ಬಗ್ಗೆ ನಿವಾಸಿಗಳಾದ ಶ್ರೀ.ಕೆ.ಎಸ್.ಸಿದ್ದಪ್ಪ ರವರು ಸಭೆಯಲ್ಲಿ ಪ್ರಸ್ತಾವನೆ ಸಲ್ಲಿಸಿದರು. | ಇದಕ್ಕೆ ಸಂಬಂದಿಸಿದಂತೆ ಈಗಾಗಲೇ ಮಾನ್ಯ ಶಾಸಕರು ನಾಮಫಲಕ ಆಳವಡಿಸುವ ಸಂಬಂಧ ಮಾನ್ಯ ಮುಖ್ಯ ಆಯುಕ್ತರು ಬಿ.ಬಿ.ಎಂ.ಪಿ ರವರಿಗೆ ಪತ್ರ ಬರೆದಿರುವುದಾಗಿ ಸಭೆಯಲ್ಲಿ ತಿಳಿಸಿದರು ಮತ್ತು ಮನವಿಯನ್ನು ಅಂಗಿಕರಿಸಿದರು. | ಸಹಾಯಕ ಅಭಿಯಂತರರು ವಾರ್ಡ್ ನಂ–02 |

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕುಷವಾಗಿ ಚರ್ಚಿಸಲಾಯಿತು, ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ವಂದನೆಗಳನ್ನು ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಶ್ರೀ.ನರಸಿಂಹಯ್ಯ
ಸಹಾಯಕ ಅಭಿಯಂತರರು

ಶ್ರೀ.ಕೆ.ಜಿ.ಸುಂದರೇಶ್
ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ
ನೋಡೆಲ್ ಅಧಿಕಾರಿಗಳು ವಾರ್ಡ್ ನಂ–02.

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರಿಗೆ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬಿ.ಬಿ.ಎಂ.ಪಿ ಯಲಹಂಕ ವಿಭಾಗ/ವಿದ್ಯುತ್/ರಸ್ತೆ ಮತ್ತು ಮೂಲಭೂತ ಸೌಕಾರ್ಯ/ಯೋಜನೆ/ಕೆರೆಗಳು/ ಯಲಹಂಕ ವಲಯ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ/ ವಿದ್ಯುತ್/ ಬೇಸ್ಕಾಂ/ ಬಿಡಬ್ಲ್ಯೂ.ಎಸ್.ಎಸ್.ಬಿ/ಬೊರೆವೆಲ್ ಡಿವಿಷನ್/ ಯಲಹಂಕ ವಲಯರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ/ಜಾಹಿರಾತು ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
7. ಆರಕ್ಷಕ ನೀರಿಕ್ಷಕರು ಯಲಹಂಕ ಪೊಲೀಸ್ ಠಾಣೆ ಸಂಚಾರಿ/ ಕಾನೂನು ಸುವ್ಯವಸ್ಥೆ/ ಯಲಹಂಕ ಬೆಂಗಳೂರು ರವರ ಸೂಕ್ತ ಕ್ರಮಕ್ಕಾಗಿ.
8. ಜಾನುವಾರಿ ಅಧಿಕಾರಿಗಳು ಪಶುಪಾಲನೆ ವಿಭಾಗ ಯಲಹಂಕ ವಲಯ ರವರ ಸೂಕ್ತ ಕ್ರಮಕ್ಕಾಗಿ.
9. ಅಧೀಕ್ಷಕರು ತೋಟಗಾರಿಕೆ ಇಲಾಖೆ ಬಿ.ಬಿ.ಎಂ.ಪಿ ಯಲಹಂಕ ವಲಯರವರ ಸೂಕ್ತ ಕ್ರಮಕ್ಕಾಗಿ.
10. ಡಿಪೋ ಮ್ಯಾನೇಜರ್ ಡಿಪೊ –13 ಪುಟ್ಟೇನಹಳ್ಳಿ ಡಿಪೋ ಯಲಹಂಕ ಬೆಂಗಳೂರು ಸೂಕ್ತ ಕ್ರಮಕ್ಕಾಗಿ.
11. ಕಛೇರಿ ಕಡತಕ್ಕೆ.